# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನೂತನವಾಗಿ ರಚಿಸಲಾಗುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಹಣಕಾಸು ಮತ್ತು ಲೆಕ್ಕಪತ್ರ ವಿಶೇಷ ತಂಡವನ್ನು ರಚಿಸುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 56 ಗ್ರಾನೀಸ (2) 2013, ದಿನಾಂಕ:04.03.2014.

---

**ಪೀಠಿಕೆ:**

ರಾಜ್ಯ ಮತ್ತು ಕೇಂದ್ರ ವಲಯಗಳಡಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಗಳ ಕಾಲಮಿತಿ ಅನುಷ್ಠಾನ ಹಾಗೂ ಸಮರ್ಪಕ ನಿರ್ವಹಣೆಯ ಸಲುವಾಗಿ ನೂತನವಾಗಿ ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆಯನ್ನು ರಚಿಸಿ ದಿನಾಂಕ:04.03.2014ರಲ್ಲಿ ಸರ್ಕಾರದ ಆದೇಶ ಹೊರಡಿಸಲಾಗಿದೆ. ಪ್ರಸ್ತುತ ಸದರಿ ನೂತನ ಇಲಾಖೆಯ ಕಾರ್ಯಕ್ರಮ ರೂಪಿಸುವ ಸಲುವಾಗಿ ಆರ್ಥಿಕ ಮತ್ತು ಲೆಕ್ಕಪತ್ರ ವಿಭಾಗದ ವಿಶೇಷ ತಂಡವನ್ನು ರಚನೆ ಮಾಡಬೇಕಾಗಿದೆ.. ಸದರಿ ತಂಡವು ನಿಗದಿಪಡಿಸಿದ ಸಮಯದಲ್ಲಿ ಅಧ್ಯಯನ ವರದಿಯನ್ನು ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 91 ಗ್ರಾನೀಸ (2) 2014 ಬೆಂಗಳೂರು, ದಿನಾಂಕ:16.08.2014**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ನೂತನ ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆಯ ರಚನೆ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆರ್ಥಿಕ ಮತ್ತು ಲೆಕ್ಕಪತ್ರ ವಿಶೇಷ ತಂಡವನ್ನು ರಚಿಸಲು ಸರ್ಕಾರವು ಹರ್ಷಿಸುತ್ತದೆ.

ತಂಡವು

1. ಆಂತರಿಕ ಆರ್ಥಿಕ ಸಲಹೆಗಾರರು (ಪ್ರಭಾರ) ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆ
2. ಆಂತರಿಕ ಆರ್ಥಿಕ ಸಲಹೆಗಾರರು ಗ್ರಾಅಪಂ.ರಾಜ್.ಇಲಾಖೆ.
3. ಮುಖ್ಯ ಆರ್ಥಿಕ ಸಲಹೆಗಾರರು ಮ.ಗಾ.ರಾ.ಗ್ರಾ.ಉ.ಖಾ.ಯೋ

ಸದರಿ ವಿಶೇಷ ತಂಡವು ಉದ್ದೇಶಿತ ಅಧ್ಯಯನದ ಕೆಲಸ ಕಾರ್ಯಗಳು ಸುಗಮವಾಗಿ ನಡೆಯುವಂತೆ ಅನುಕೂಲವಾಗಲು ತಮಗೆ ಅಗತ್ಯವಿರುವ 2 ಅಥವಾ 3 ಲೆಕ್ಕಪತ್ರ ಸಹಾಯಕರನ್ನು ನೇಮಿಸಿಕೊಳ್ಳಬಹುದು.

1. ನೂತನ ಗ್ರಾಮೀಣ ನೀರು-ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಮತ್ತು NRDWP ಮತ್ತು ಜಲನಿರ್ಮಲ ಯೋಜನೆಗಳ ಕಾರ್ಯಕ್ರಮ ಹಾಗೂ ಆರ್ಥಿಕ ಹಾಗೂ ಲೆಕ್ಕಪತ್ರ ಕುರಿತು ಅಧ್ಯಯನ ಮಾಡಿ ಯಥಾವತ್ ವಿವರವಾದ ವರದಿಯನ್ನು ಸಲ್ಲಿಸುವುದು.

2. ಸದರಿ ಆರ್ಥಿಕ ಹಾಗೂ ಲೆಕ್ಕಪತ್ರ ವಿಶೇಷ ತಂಡದ ಅಧ್ಯಯನ ವರದಿ ಅಧಾರದ ಮೇಲೆ ಮಾರ್ಗಸೂಚಿ ಹಾಗೂ GFRಗಳ ಸಹಿತ ವರದಿಯನ್ನು ದಿನಾಂಕ:20.09.2014ರೊಳಗೆ ಸಲ್ಲಿಸಬೇಕು. ಅಲ್ಲದೇ,

3. F&A ಒಳಗೊಂಡ ಮಾಹಿತಿಯನ್ನು ವಿಶೇಷ ತಂಡವು ಈ ಕುರಿತಾದ ಪೂರ್ವಭಾವಿ ವರದಿಯನ್ನು ದಿನಾಂಕ:29.08.2014ರೊಳಗಾಗಿ ಆಯುಕ್ತರು, ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆರವರಿಗೆ ಸಲ್ಲಿಸಬೇಕು.

4. ಸಂಬಂಧಿಸಿದ ಎಲ್ಲಾ ಅಧಿಕಾರಿ / ಸಿಬ್ಬಂದಿ ವರ್ಗದವರು ಈ ಸಲುವಾಗಿ ಸಹಕಾರವನ್ನು ನೀಡಬೇಕು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16-8-14

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇಮೇಲ್:rk3452000@gmail.com
ಫೋನ್:22032806, ಫ್ಯಾಕ್ಸ್:22203175

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
7. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು-09.
8. ಆಯುಕ್ತರು ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
9. ಆಂತರಿಕ ಆರ್ಥಿಕ ಸಲಹೆಗಾರರು (ಪ್ರಭಾರ) ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆ
10. ಆಂತರಿಕ ಆರ್ಥಿಕ ಸಲಹೆಗಾರರು ಗ್ರಾಅಪಂ.ರಾಜ್.ಇಲಾಖೆ.
11. ಮುಖ್ಯ ಆರ್ಥಿಕ ಸಲಹೆಗಾರರು ಮ.ಗಾ.ರಾ.ಗ್ರಾ.ಉ.ಖಾ.ಯೋ
12. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ ಕರ್ನಾಟಕ ವಿಕಾಸ ಗ್ರಾಅಪಂ.ರಾಜ್ ಇಲಾಖೆ ಬೆಂಗಳೂರು.
13. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
14. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
15. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
16. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.